# All India Radio: Bangalore
# National Bulletin In Kannada
# 18.08.2025  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಉಪರಾಷ್ಟ್ರಪತಿ ಚುನಾವಣೆ : ಎನ್.ಡಿ.ಎ. ಅಭ್ಯರ್ಥಿಯಾಗಿ ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಆಯ್ಕೆ
2. ಉಕ್ರೇನ್-ರಷ್ಯಾ ಯುದ್ಧ ಶಮನದ ನಿಟ್ಟಿನಲ್ಲಿ ಇಂದು ಡೊನಾಲ್ಡ್ ಟ್ರಂಪ್- ವೊಲೊಡಿಮಿರ್ ಝೆಲೆನ್ಸ್ಕಿ ನಿರ್ಣಾಯಕ ಸಭೆ
3. ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಇಂದಿನಿಂದ ಎರಡು ದಿನಗಳ ಭಾರತ ಭೇಟಿ
4. ಡೈಮಂಡ್ ಲೀಗ್ ಜಾವಲಿನ್ ಫೈನಲ್‌ನಲ್ಲಿ ಅಧಿಕೃತ ಸ್ಥಾನ ಪಡೆದ ನೀರಜ್ ಚೋಪ್ರಾ

<><><><>

ಮುಂಬರುವ ಉಪರಾಷ್ಟ್ರಪತಿ ಚುನಾವಣೆಗೆ ಎನ್.ಡಿ.ಎ. ಅಭ್ಯರ್ಥಿಯಾಗಿ ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಅವರನ್ನು ಆಯ್ಕೆ ಮಾಡಲಾಗಿದೆ. ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ನಿನ್ನೆ ನಡೆದ ಬಿಜೆಪಿ ಸಂಸದೀಯ ಮಂಡಳಿ ಸಭೆಯ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಜೆ.ಪಿ.ನಡ್ಡಾ ಈ ವಿಷಯವನ್ನು ಘೋಷಿಸಿದರು. ಎಲ್ಲಾ ಎನ್.ಡಿ.ಎ. ಮಿತ್ರಪಕ್ಷಗಳು ಈ ನಿರ್ಧಾರವನ್ನು ಬೆಂಬಲಿಸಿದ್ದಾರೆ. ಉಪರಾಷ್ಟ್ರಪತಿ ಚುನಾವಣೆಯನ್ನು ಒಮ್ಮತದಿಂದ ನಡೆಸುವುದನ್ನು ಖಚಿತಪಡಿಸಿಕೊಳ್ಳಲು ಬಿಜೆಪಿ, ಎಲ್ಲಾ ಪಕ್ಷಗಳೊಂದಿಗೆ ಸಮನ್ವಯ ಸಾಧಿಸುವ ಗುರಿಯನ್ನು ಹೊಂದಿದೆ. ಕಳೆದ ವಾರದಿಂದ ಎನ್.ಡಿ.ಎ. ಪಾಲುದಾರರು ಮತ್ತು ವಿರೋಧ ಪಕ್ಷಗಳನ್ನು ಈ ಬಗ್ಗೆ ಸಂಪರ್ಕಿಸಲಾಗಿದೆ ಎಂದು ಜೆ.ಪಿ.ನಡ್ಡಾ ಹೇಳಿದರು. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಇತರೆ ಸಂಸದೀಯ ಮಂಡಳಿ ಸದಸ್ಯರು ಸಭೆಯಲ್ಲಿ ಭಾಗವಹಿಸಿದ್ದರು. ಜಗದೀಪ್ ಧನ್‌ಖರ್ ಅವರ ರಾಜೀನಾಮೆಯಿಂದಾಗಿ ತೆರವಾಗಿದ್ದ ಸ್ಥಾನಕ್ಕೆ ಮುಂದಿನ ತಿಂಗಳು ೯ ರಂದು ಚುನಾವಣೆ ನಡೆಯಲಿದೆ. ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಅವರನ್ನು ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ನಾಮನಿರ್ದೇಶನ ಮಾಡಿದ ಎನ್‌ಡಿಎ ನಿರ್ಧಾರವನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದ್ದಾರೆ. ತಮ್ಮ ದೀರ್ಘಾವಧಿಯ ಸಾರ್ವಜನಿಕ ಜೀವನದಲ್ಲಿ, ರಾಧಾಕೃಷ್ಣನ್ ಅವರು ತಮ್ಮ ಸಮರ್ಪಣೆ, ನಮ್ರತೆ ಮತ್ತು ಬುದ್ಧಿಶಕ್ತಿಯ ಮೂಲಕ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ. ರಾಧಾಕೃಷ್ಣನ್ ಅವರು ವಿವಿಧ ಹುದ್ದೆಗಳಲ್ಲಿ ಯಾವಾಗಲೂ ಸಮುದಾಯ ಸೇವೆ ಮತ್ತು ಸಮಾಜದ ಅಂಚಿನಲ್ಲಿರುವವರ ಸಬಲೀಕರಣದತ್ತ ಗಮನಹರಿಸಿದ್ದಾರೆ. ಅವರು ತಮಿಳುನಾಡಿನಲ್ಲಿ ತಳಮಟ್ಟದಲ್ಲಿ ವ್ಯಾಪಕವಾದ ಕೆಲಸ ಮಾಡಿದ್ದಾರೆ ಹಾಗೂ ಸಂಸದರಾಗಿ ಮತ್ತು ವಿವಿಧ ರಾಜ್ಯಗಳ ರಾಜ್ಯಪಾಲರಾಗಿ ಹೆಚ್ಚು ಅನುಭವ ಹೊಂದಿದ್ದಾರೆ ಎಂದರು. ರಾಧಾಕೃಷ್ಣನ್ ಅವರು ಸ್ಫೂರ್ತಿದಾಯಕ ಉಪರಾಷ್ಟ್ರಪತಿಯಾಗುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದರು. ಇದೇ ವೇಳೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಕೂಡ ಎನ್‌ಡಿಎ ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ನಾಮನಿರ್ದೇಶನಗೊಂಡಿದ್ದಕ್ಕಾಗಿ ರಾಧಾಕೃಷ್ಣನ್ ಅವರನ್ನು ಅಭಿನಂದಿಸಿದ್ದಾರೆ.

<><><><>

ಭಾರತದಲ್ಲಿ ತಯಾರಿಸಿದ ಉತ್ಪನ್ನಗಳನ್ನು ನಂಬಿ ಖರೀದಿಸುವಂತೆ ಹಾಗೂ 'ವೋಕಲ್ ಫಾರ್ ಲೋಕಲ್'ಗೆ ಹೆಚ್ಚಿನ ಒತ್ತು ನೀಡುವಂತೆ ಜನರನ್ನು ಪ್ರಧಾನಿ ನರೇಂದ್ರ ಮೋದಿ ಒತ್ತಾಯಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ

ಸುಮಾರು ೧೧ ಸಾವಿರ ಕೋಟಿ ರೂಪಾಯಿ ಮೌಲ್ಯದ ಎರಡು ಪ್ರಮುಖ ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ದೇಶಾದ್ಯಂತ ನಾಗರಿಕರಿಗೆ ಪ್ರಯೋಜನಗಳನ್ನು ತರಲಿವೆ ಎಂದು ಹೇಳಿದರು. ತಮ್ಮ ಸರ್ಕಾರಕ್ಕೆ ಸುಧಾರಣೆ ಎಂದರೆ ಉತ್ತಮ ಆಡಳಿತದ ವಿಸ್ತರಣೆ. ಜನರ ಜೀವನವನ್ನು ಸುಲಭಗೊಳಿಸುವುದು ತಮ್ಮ ಸರ್ಕಾರದ ನಿರಂತರ ಪ್ರಯತ್ನವಾಗಿದೆ. ಈ ಗುರಿ ಪ್ರತಿಯೊಂದು ನೀತಿ ಮತ್ತು ಪ್ರತಿಯೊಂದು ನಿರ್ಧಾರಕ್ಕೂ ಮಾರ್ಗದರ್ಶನ ನೀಡುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು.

<><><><>

ಉಕ್ರೇನ್-ರಷ್ಯಾ ಯುದ್ಧಕ್ಕೆ ತ್ವರಿತ ಪರಿಹಾರಕ್ಕಾಗಿ ಒತ್ತಡ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಐರೋಪ್ಯ ದೇಶಗಳ ನಾಯಕರು ಇಂದು ಅಮೆರಿಕದ ವಾಷಿಂಗ್ಟನ್‌ನಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಹಾಗೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ನಿರ್ಣಾಯಕ ಸಭೆ ನಡೆಸಲಿದ್ದಾರೆ. ಉನ್ನತ ಮಟ್ಟದ ನಿಯೋಗದಲ್ಲಿ ಬ್ರಿಟನ್ ಪ್ರಧಾನಿ ಸರ್ ಕೀರ್ ಸ್ಟಾರ್ಮರ್, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಜರ್ಮನ್ ಚಾನ್ಸೆಲರ್ ಫ್ರೆಡ್ರಿಕ್ ಮೆರ್ಜ್, ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಮತ್ತು ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಸೇರಿದ್ದಾರೆ. ಝೆಲೆನ್ಸ್ಕಿ ಅವರ ನಿಲುವನ್ನು ಬಲಪಡಿಸಲು ಮತ್ತು ಯಾವುದೇ ಪ್ರಸ್ತಾವಿತ ಶಾಂತಿ ನಿಯಮಗಳು ಉಕ್ರೇನ್‌ನ ಸಾರ್ವಭೌಮತ್ವ ಅಥವಾ ದೀರ್ಘಕಾಲೀನ ಭದ್ರತೆಯನ್ನು ದುರ್ಬಲಗೊಳಿಸದಂತೆ ನೋಡಿಕೊಳ್ಳಲು ನಾಯಕರು ಆಶಿಸುತ್ತಿದ್ದಾರೆ.

<><><><>

ದೇಶದಲ್ಲಿ ಮಧುಮೇಹ ಮತ್ತು ಬೊಜ್ಜು ವಿರುದ್ಧದ ಹೋರಾಟದಲ್ಲಿ ರೋಗಿಗಳಿಗೆ ಭಾರತೀಯ ಪದ್ಧತಿಯ ಪರಿಹಾರಗಳನ್ನು ಪಾಲಿಸುವಂತೆ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಬೊಜ್ಜು, ಹೊಟ್ಟೆಯ ಸುತ್ತ ಕೊಬ್ಬು ಶೇಖರಣೆ, ಪಾಶ್ಚಿಮಾತ್ಯ ಜನಸಂಖ್ಯೆಗಿಂತ ಭಾರತೀಯರಿಗೆ ಹೆಚ್ಚು ಗಂಭೀರ ಅಪಾಯವನ್ನುಂಟು ಮಾಡುತ್ತದೆ ಎಂದು ಹೇಳಿದರು. ಅವೈಜ್ಞಾನಿಕ ಆಹಾರ ಪಟ್ಟಿಗಳು ಮತ್ತು ಫ್ಯಾಡ್ ಕಟ್ಟುಪಾಡುಗಳ ಮೂಲಕ ತಪ್ಪು ಮಾಹಿತಿಯ ಅನಿಯಂತ್ರಿತ ಹರಡುವಿಕೆಯ ವಿರುದ್ಧವೂ ಅವರು ಗಮನಸೆಳೆದರು. ವಿಶೇಷವಾಗಿ ಭಾರತದ ಯುವ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು, ೪೦ ವರ್ಷಕ್ಕಿಂತ ಕಡಿಮೆ ವಯಸ್ಸಿನ ಜನಸಂಖ್ಯೆಯ ಶೇಕಡ ೭೦ ಕ್ಕಿಂತ ಹೆಚ್ಚು ಜನರು ದೇಶದಲ್ಲಿ ಇರುವುದರಿಂದ, ದೇಶವು ಜೀವನಶೈಲಿ ಸಂಬಂಧಿ ರೋಗಗಳ ಕಾರಣ ತನ್ನ ಸಾಮರ್ಥ್ಯದಲ್ಲಿ ರಾಜಿ ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಡಾ. ಜಿತೇಂದ್ರ ಸಿಂಗ್ ಹೇಳಿದರು.

<><><><>

ಚೀನಾ ವಿದೇಶಾಂಗ ಸಚಿವ ಮತ್ತು ಚೀನಾ ಕಮ್ಯುನಿಸ್ಟ್ ಪಕ್ಷದ ಪೊಲಿಟ್‌ಬ್ಯೂರೋ ಸದಸ್ಯ ವಾಂಗ್ ಯಿ ಇಂದಿನಿಂದ ಎರಡು ದಿನಗಳ ಭಾರತ ಭೇಟಿ ಕೈಗೊಂಡಿದ್ದಾರೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಆಹ್ವಾನದ ಮೇರೆಗೆ ಅವರು ಭಾರತಕ್ಕೆ ಭೇಟಿ ನೀಡುತ್ತಿದ್ದಾರೆ. ಭೇಟಿಯ ಸಮಯದಲ್ಲಿ, ಚೀನಾದ ವಿದೇಶಾಂಗ ಸಚಿವರು ಭಾರತದ ವಿಶೇಷ ಪ್ರತಿನಿಧಿ ಅಜಿತ್ ದೋವಲ್ ಅವರೊಂದಿಗೆ ಭಾರತ-ಚೀನಾ ಗಡಿಯ ಕುರಿತು ವಿಶೇಷ ಪ್ರತಿನಿಧಿಗಳ ೨೪ನೇ ಸುತ್ತಿನ ಮಾತುಕತೆ ನಡೆಸಲಿದ್ದಾರೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಕೂಡ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ.

<><><><>

ಜಮ್ಮು ಮತ್ತು ಕಾಶ್ಮೀರದ ಕಥುವಾ ಜಿಲ್ಲೆಯ ಹಲವಾರು ಭಾಗಗಳಲ್ಲಿ ಮೇಘಸ್ಫೋಟ ಮತ್ತು ಭೂಕುಸಿತದಿಂದ ಸಂಭವಿಸಿದ ದುರಂತ ಜೀವಹಾನಿಗೆ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಸಂತಾಪ

ವ್ಯಕ್ತಪಡಿಸಿದ್ದು, ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಪರಿಹಾರ ನೆರವು ಘೋಷಿಸಿದ್ದಾರೆ. ಮೃತರಿಗೆ ತಲಾ ೨ ಲಕ್ಷ ರೂಪಾಯಿ, ತೀವ್ರವಾಗಿ ಗಾಯಗೊಂಡವರಿಗೆ ೧ ಲಕ್ಷ ರೂಪಾಯಿ ಮತ್ತು ಸಣ್ಣ-ಪುಟ್ಟ ಗಾಯಗಳಾದವರಿಗೆ ೫೦ ಸಾವಿರ ರೂಪಾಯಿ, ಸೇರಿವೆ. ಸಂಪೂರ್ಣ ಹಾನಿಗೊಳಗಾದ ಮನೆಗಳಿಗೆ ೧ ಲಕ್ಷ ರೂಪಾಯಿ, ತೀವ್ರವಾಗಿ ಹಾನಿಗೊಳಗಾದ ಮನೆಗಳಿಗೆ ೫೦ ಸಾವಿರ ರೂಪಾಯಿ ಮತ್ತು ಭಾಗಶಃ ಹಾನಿಗೊಳಗಾದ ಮನೆಗಳಿಗೆ ೨೫ ಸಾವಿರ ರೂಪಾಯಿ ನೆರವು ನೀಡಲಾಗುವುದು ಎಂದು ಒಮರ್ ಅಬ್ದುಲ್ಲಾ ತಿಳಿಸಿದ್ದಾರೆ. ಕಥುವಾದಲ್ಲಿನ ಪರಿಸ್ಥಿತಿಯ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರೊಂದಿಗೆ ಚರ್ಚಿಸಿದ್ದು, ಕೇಂದ್ರದಿಂದ ಅಗತ್ಯವಿರುವ ಎಲ್ಲಾ ಬೆಂಬಲವನ್ನು ನೀಡುವ ಭರವಸೆ ನೀಡಿದ್ದಾರೆ.

<><><><>

ಹಾಲಿ ವಿಶ್ವ ಚಾಂಪಿಯನ್ ಮತ್ತು ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತ ಜಾವಲಿನ್ ಎಸೆತಗಾರ ನೀರಜ್ ಚೋಪ್ರಾ ಈ ತಿಂಗಳ ೨೭ ಮತ್ತು ೨೮ ರಂದು ಸ್ವಿಟ್ಜರ್‌ಲ್ಯಾಂಡ್‌ನ ಜ್ಯೂರಿಚ್‌ನಲ್ಲಿ ನಡೆಯಲಿರುವ ೨೦೨೫ ರ ಡೈಮಂಡ್ ಲೀಗ್ ಫೈನಲ್‌ನಲ್ಲಿ ಅಧಿಕೃತವಾಗಿ ಸ್ಥಾನ ಪಡೆದಿದ್ದಾರೆ. ಇತ್ತೀಚಿನ ಸಿಲೇಸಿಯಾ ಕ್ರೀಡಾಕೂಟ ತಪ್ಪಿಸಿಕೊಂಡರೂ, ಈ ಋತುವಿನಲ್ಲಿ ಚೋಪ್ರಾ ಅವರ ಹಿಂದಿನ ಪ್ರದರ್ಶನಗಳು ಅವರ ಅರ್ಹತೆಯ ಆಧಾರದ ಮೇಲೆ ಸ್ಥಾನ ಖಚಿತವಾಗಿದೆ. ಕೇವಲ ಎರಡು ಪಂದ್ಯಗಳಿಂದ ೧೫ ಅಂಕಗಳೊಂದಿಗೆ, ಅವರು ಪುರುಷರ ಜಾವೆಲಿನ್ ಥ್ರೋ ಫೈನಲ್‌ನಲ್ಲಿ ಅಗ್ರ ಸ್ಪರ್ಧಿಗಳ ಪಟ್ಟಿಗೆ ಸೇರಿದ್ದಾರೆ. ಪ್ಯಾರಿಸ್ ಚರಣದಲ್ಲಿ ೮೮.೧೬ ಮೀಟರ್ ಜಾವಲಿನ್ ಎಸೆತದೊಂದಿಗೆ ನೀರಜ್ ಚೋಪ್ರಾ ಗೆಲುವು ಸಾಧಿಸಿದರು ಮತ್ತು ದೋಹಾದಲ್ಲಿ ೯೦.೨೩ ಮೀಟರ್ ಹೊಸ ದಾಖಲೆಯನ್ನು ಸ್ಥಾಪಿಸಿದ್ದರು, ಅಲ್ಲಿ ಅವರು ಎರಡನೇ ಸ್ಥಾನ ಪಡೆದಿದ್ದರು. ನೀರಜ್ ಚೋಪ್ರಾ ಈ ಹಿಂದೆ ೨೦೨೨ ರಲ್ಲಿ ಡೈಮಂಡ್ ಲೀಗ್ ಪ್ರಶಸ್ತಿಯನ್ನು ಗೆದ್ದಿದ್ದರು ಹಾಗೂ ೨೦೨೩ ಮತ್ತು ೨೦೨೪ ರಲ್ಲಿ ರನ್ನರ್-ಅಪ್ ಸ್ಥಾನಗಳನ್ನು ಪಡೆದಿದ್ದರು.

<><><><>

ಬಲ್ಗೇರಿಯಾದಲ್ಲಿ ನಡೆದ ೨೦ ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನ ೯೭ ಕೆ.ಜಿ ಫ್ರೀಸ್ಟೈಲ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಮಾಗೊಮೆಡ್‌ಗಡ್ಜಿ ಮಾಗೊಮೆಡೋವ್ ವಿರುದ್ಧ ಸೋತ ನಂತರ ಭಾರತೀಯ ಕುಸ್ತಿಪಟು ವಿಶಾಲ್ ಕಂಚಿನ ಪದಕಕ್ಕಾಗಿ ಹೋರಾಡಲಿದ್ದಾರೆ. ವಿಶಾಲ್, ತೀವ್ರ ಪೈಪೋಟಿಯಿಂದ ಕೂಡಿದ ಸೆಮಿಫೈನಲ್‌ನಲ್ಲಿ ೯-೧೧ ಅಂತರದಿಂದ ಸೋತರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>